**All India Radio: Bangalore**
**National Bulletin In Kannada**
**31.03.2026 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**31.03.2026 07.35 a.m.**

**<><><><>**

ಮುಖ್ಯಾಂಶಗಳು

1. ನೆದರ್ಲ್ಯಾಂಡ್ಸ್ ಪ್ರಧಾನಿ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆ
2. ಇಂದಿನಿಂದ ಬಿಹಾರ, ಕರ್ನಾಟಕಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ
3. ಒಪ್ಪಂದಕ್ಕೆ ಬರದಿದ್ದರೆ, ಇರಾನ್‌ನ ಇಂಧನ ಸಂಪನ್ಮೂಲಗಳ ಮೇಲೆ ತೀವ್ರ ದಾಳಿ: ಅಮೆರಿಕ ಎಚ್ಚರಿಕೆ
4. ಐಪಿಎಲ್ ಟಿ-೨೦ ಕ್ರಿಕೆಟ್: ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ರಾಜಸ್ಥಾನ್ ರಾಯಲ್ಸ್ ತಂಡಕ್ಕೆ ಎಂಟು ವಿಕೆಟ್‌ಗಳ ಭರ್ಜರಿ ಜಯ

<><><><>

ಪ್ರಧಾನಿ ನರೇಂದ್ರ ಮೋದಿ ಅವರು ನೆದರ್ಲ್ಯಾಂಡ್ಸ್ ಪ್ರಧಾನಿ ರಾಬ್ ಜೆಟ್ಟನ್ ಅವರೊಂದಿಗೆ ದೂರವಾಣಿ ಮೂಲಕ ಮಾತುಕತೆ ನಡೆಸಿದರು. ಸಂಭಾಷಣೆಯ ಸಮಯದಲ್ಲಿ ಭಾರತ-ನೆದರ್ಲ್ಯಾಂಡ್ಸ್ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ಮಾರ್ಗಗಳ ಕುರಿತು ಉಭಯ ನಾಯಕರು ಚರ್ಚಿಸಿದರು. ಸೆಮಿಕಂಡಕ್ಟರ್‌ಗಳು, ಬೃಹತ್ ನೀರಿನ ಯೋಜನೆಗಳು ಮತ್ತು ಹಸಿರು ಹೈಡ್ರೋಜನ್‌ನಂತಹ ಕ್ಷೇತ್ರಗಳಲ್ಲಿ ಉಭಯ ದೇಶಗಳ ನಡುವಿನ ಪಾಲುದಾರಿಕೆಯ ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಚರ್ಚೆ ನಡೆಯಿತು. ಪಶ್ಚಿಮ ಏಷ್ಯಾದ ಪರಿಸ್ಥಿತಿಯ ಬಗ್ಗೆ ಇಬ್ಬರೂ ನಾಯಕರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು ಹಾಗೂ ಈ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಶೀಘ್ರವಾಗಿ ಪುನಃಸ್ಥಾಪಿಸುವ ಅಗತ್ಯವನ್ನು ಒತ್ತಿ ಹೇಳಿದರು.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದಿನಿಂದ ಎರಡು ದಿನಗಳ ಕಾಲ ಬಿಹಾರ ಮತ್ತು ಕರ್ನಾಟಕಕ್ಕೆ ಭೇಟಿ ನೀಡಲಿದ್ದಾರೆ. ಅವರು ಇಂದು ಬಿಹಾರದ ರಾಜಗೀರ್‌ನಲ್ಲಿರುವ ನಳಂದ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ನಾಳೆ ಕರ್ನಾಟಕದ ತುಮಕೂರಿನ ಶ್ರೀ ಸಿದ್ದಗಂಗಾ ಮಠದಲ್ಲಿ ಶ್ರೀ ಶಿವಕುಮಾರ ಸ್ವಾಮೀಜಿ ಅವರ ೧೧೯ನೇ ಜನ್ಮದಿನಾಚರಣೆ ಮತ್ತು ಗುರುವಂದನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಇಂದು ಲೋಕಭವನದಲ್ಲಿ ತಂಗಲಿರುವ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಬಿಗಿ ಭದ್ರತೆ ಕೈಗೊಳ್ಳಲಾಗಿದೆ. ಮುನ್ನೆಚ್ಚರಿಕಾ ಕ್ರಮವಾಗಿ ತುಮಕೂರಿನಲ್ಲಿ ೧೫ ಸಾವಿರ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿದೆ.

<><><><>

ಪ್ರಧಾನಿ ನರೇಂದ್ರ ಮೋದಿ ಇಂದು ಗುಜರಾತ್‌ಗೆ ಒಂದು ದಿನದ ಭೇಟಿ ನೀಡಲಿದ್ದಾರೆ. ಅವರು ಇಂದು ಬೆಳಗ್ಗೆ ಗಾಂಧಿನಗರದಲ್ಲಿರುವ ಸಾಮ್ರಾಟ್ ಸಂಪ್ರತಿ ವಸ್ತುಸಂಗ್ರಹಾಲಯವನ್ನು ಉದ್ಘಾಟಿಸಲಿದ್ದಾರೆ. ಈ ವೇಳೆ ಅವರು ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಬಳಿಕ ಪ್ರಧಾನಿಯವರು ಅಹಮದಾಬಾದ್‌ನ ಸನಂದ್‌ನಲ್ಲಿರುವ ಕೇನ್ಸ್ ಸೆಮಿಕಾನ್ ಸ್ಥಾವರವನ್ನು ಉದ್ಘಾಟಿಸಲಿದ್ದಾರೆ ಮತ್ತು ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನಂತರ, ಅವರು ವಾವ್-ಥರಾದ್‌ಗೆ ಪ್ರಯಾಣಿಸಲಿದ್ದಾರೆ. ಅಲ್ಲಿ ಅವರು ಸುಮಾರು ೨೦ ಸಾವಿರ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಅಡಿಪಾಯ ಹಾಕಲಿದ್ದಾರೆ ಮತ್ತು ಉದ್ಘಾಟಿಸಲಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಿ ಅವರು ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ.

<><><><>

ಕರ್ನಾಟಕ, ಹರಿಯಾಣ ಮತ್ತು ಉತ್ತರ ಪ್ರದೇಶದಲ್ಲಿ ೨೦೨೫-೨೬ರ ಹಿಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆಯಲ್ಲಿ ದಾಖಲೆ ಪ್ರಮಾಣದ ದ್ವಿದಳ ಧಾನ್ಯಗಳು ಮತ್ತು ಎಣ್ಣೆಬೀಜಗಳನ್ನು ಸಂಗ್ರಹಿಸಲು ರಾಜ್ಯ ಸರ್ಕಾರಗಳಿಂದ ಪ್ರಸ್ತಾವನೆಗಳನ್ನು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅನುಮೋದಿಸಿದ್ದಾರೆ. ಈ ಖರೀದಿಯನ್ನು ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ ಕೈಗೊಳ್ಳಲಾಗುವುದು. ಹರಿಯಾಣ, ಉತ್ತರ ಪ್ರದೇಶ ಮತ್ತು ಕರ್ನಾಟಕಕ್ಕೆ ಅನುಮೋದಿತ ಪಿಎಸ್‌ಎಸ್ ಪ್ರಸ್ತಾವನೆಗಳ ಮೂಲಕ, ಕಡಲೆ, ಮಸೂರ್, ಸಾಸಿವೆ ಮತ್ತು ಕುಸುಮ್ ನಂತಹ ಪ್ರಮುಖ ದ್ವಿದಳ ಧಾನ್ಯಗಳು ಹಾಗೂ ಎಣ್ಣೆಬೀಜ ಬೆಳೆಗಳ ವೈಜ್ಞಾನಿಕ ಮತ್ತು ಉತ್ತಮವಾಗಿ ನಿರ್ವಹಿಸಲಾದ ಸಂಗ್ರಹಣೆಯನ್ನು ಖಚಿತಪಡಿಸಿಕೊಳ್ಳಲಾಗುವುದು ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ತಿಳಿಸಿದೆ.

<><><><>

ಪ್ರಧಾನಮಂತ್ರಿ ಸ್ವನಿಧಿ ಯೋಜನೆಯಡಿಯಲ್ಲಿ ಬೀದಿ ಬದಿ ವ್ಯಾಪಾರಿ ಫಲಾನುಭವಿಗಳಿಗೆ ಇದುವರೆಗೆ ೧೭ ಸಾವಿರದ ೧೧೫ ಕೋಟಿ ರೂಪಾಯಿಗಳ ಒಟ್ಟು ಒಂದು ಕೋಟಿಗೂ ಹೆಚ್ಚು ಸಾಲಗಳನ್ನು ವಿತರಿಸಲಾಗಿದೆ ಎಂದು ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ರಾಜ್ಯ ಸಚಿವ ತೋಖನ್ ಸಾಹು ತಿಳಿಸಿದ್ದಾರೆ. ರಾಜ್ಯಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಸಚಿವರು, ನಗರ ಬೀದಿ ಬದಿ ವ್ಯಾಪಾರಿಗಳಿಗೆ ಮೇಲಾಧಾರ ರಹಿತ ಕಾರ್ಯನಿರತ ಬಂಡವಾಳ ಅವಧಿಯ ಸಾಲಗಳನ್ನು ಒದಗಿಸಲು, ಈ ಯೋಜನೆಯನ್ನು ೨೦೨೦ ರ ಜೂನ್‌ನಲ್ಲಿ ಪ್ರಾರಂಭಿಸಲಾಯಿತು ಎಂದರು.  ಮೊದಲ ಕಂತಿಗೆ ಬೀದಿ ಬದಿ ವ್ಯಾಪಾರಿಗಳಿಗೆ ೧೫ ಸಾವಿರ ರೂಪಾಯಿ ಮತ್ತು ಎರಡನೇ ಕಂತಿಗೆ ೨೫ ಸಾವಿರ ರೂಪಾಯಿ ಸಾಲವನ್ನು ನೀಡಲಾಗುತ್ತಿದೆ. ಪುನರ್ರಚಿಸಲಾದ ಯೋಜನೆಯು ಈಗ ಚಿಲ್ಲರೆ ಡಿಜಿಟಲ್ ವಹಿವಾಟುಗಳ ಮೇಲಿನ ಕ್ಯಾಶ್‌ಬ್ಯಾಕ್ ಜೊತೆಗೆ ಸಗಟು ಖರೀದಿಗಳ ಮೇಲೆ ಕ್ಯಾಶ್‌ಬ್ಯಾಕ್ ಅನ್ನು ಒದಗಿಸುತ್ತದೆ ಎಂದು ಅವರು ಹೇಳಿದರು.

<><><>

ಸಾಮ್ರಾಟ್ ಅಶೋಕ ಸೇರಿದಂತೆ ವಿವಿಧ ಚಕ್ರವರ್ತಿಗಳ ಶಿಲಾಶಾಸನಗಳನ್ನು  ಮುಂದಿನ ಪೀಳಿಗೆಗೆ ತಿಳಿಸಲು ಅವುಗಳನ್ನು  ಸಂರಕ್ಷಿಸಲು ಕ್ರಮ ತೆಗೆದುಕೊಳ್ಳುವಂತೆ ರಾಜ್ಯಸಭಾ ಸದಸ್ಯೆ ಸುಧಾ ಮೂರ್ತಿ, ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದಾರೆ. ರಾಜ್ಯಸಭೆಯಲ್ಲಿ ಈ ವಿಷಯ ಪ್ರಸ್ತಾಪಿಸಿದ ಅವರು, ರಾಯಚೂರು ಜಿಲ್ಲೆಯ ಮಸ್ಕಿಯಲ್ಲಿರುವ ಅಶೋಕನ ಶಿಲಾಶಾಸನವು ಅತ್ಯಂತ ಮಹತ್ವದ ಐತಿಹಾಸಿಕ ಆಧಾರವಾಗಿದೆ. ಏಕೆಂದರೆ ಇದು ಚಕ್ರವರ್ತಿಯನ್ನು ನೇರವಾಗಿ 'ದೇವನಾಂಪ್ರಿಯ ಅಶೋಕ' ಎಂದು ಉಲ್ಲೇಖಿಸಿದ ಮೊದಲ ಶಾಸನವಾಗಿದೆ ಎಂದರು. ಈ ಶಾಸನವು ಪ್ರಕೃತ ಭಾಷೆ ಮತ್ತು ಬ್ರಾಹ್ಮಿ ಲಿಪಿಯಲ್ಲಿದೆ. ಇದು ಬೌದ್ಧ ಧರ್ಮದ ಪ್ರಸಾರ ಮತ್ತು ಮೌರ್ಯರ ಇತಿಹಾಸವನ್ನು ತಿಳಿಸುತ್ತದೆ. ಇದೇ ರೀತಿ ಹಲವೆಡೆಗಳಲ್ಲಿ ಶಿಲಾಶಾಸನವು ಇದ್ದು, ಅವುಗಳನ್ನು ಯಾವುದಾದರೂ ರೂಪದಲ್ಲಿ ಸಂರಕ್ಷಿಸಿ ಇಡುವ ಅಗತ್ಯವಿದೆ ಎಂದು ಅವರು ಹೇಳಿದರು. ಬಳಿಕ ನಡೆದ ಪ್ರಶ್ನೋತ್ತರ ಕಲಾಪದಲ್ಲಿ, ವಿಮಾನ ವಿಳಂಬವಾದರೆ ಪ್ರಯಾಣಿಕರಿಗೆ ಪರಿಹಾರ ನೀಡುವ ಸಂಬಂಧದ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ನಾಗರಿಕ ವಿಮಾನಯಾನ ಸಚಿವ ಕೆ.ರಾಮ್ ಮೋಹನ್ ನಾಯ್ಡು, ಕೆಲವು ಸಂದರ್ಭಗಳಲ್ಲಿ ಹವಾಮಾನ ವೈಪರೀತ್ಯ ಸೇರಿದಂತೆ ಕೆಲವು ಕಾರಣಗಳಿಂದ ವಿಮಾನ ವಿಳಂಬವಾಗುವ ಸಾಧ್ಯತೆ ಇರುತ್ತದೆ. ಆ ಸಮಯದಲ್ಲಿ ಪರಿಸ್ಥಿತಿ ಕೈಮೀರಿದಾಗ ಏನೂ ಮಾಡಲು ಸಾಧ್ಯವಾಗುವುದಿಲ್ಲ. ಅದನ್ನು ಹೊರತುಪಡಿಸಿದರೆ, ಪ್ರಯಾಣಿಕರಿಗೆ ಪರಿಹಾರ ನೀಡುವ ಹಾಗೂ ಅವರ ಹಣವನ್ನು ವಾಪಸ್ ಮಾಡುವ ಬಗ್ಗೆ ಈಗಾಗಲೇ ನಿಯಮ ರೂಪಿಸಲಾಗಿದೆ ಎಂದು ತಿಳಿಸಿದರು.

<><><>

ಭಾರತದಲ್ಲಿ ವಾಯುಯಾನ ಟರ್ಬೈನ್ ಇಂಧನ-ಎಟಿಎಫ್ ಪೂರೈಕೆ ಸಾಕಷ್ಟು ಪ್ರಮಾಣದಲ್ಲಿ ಇದೆ ಎಂದು ನಾಗರಿಕ ವಿಮಾನಯಾನ ಸಚಿವ ಕೆ.ರಾಮಮೋಹನ್ ನಾಯ್ಡು ತಿಳಿಸಿದ್ದಾರೆ. ರಾಜ್ಯಸಭೆಯಲ್ಲಿ ಪ್ರಶ್ನೋತ್ತರ ಅವಧಿಯಲ್ಲಿ ಉತ್ತರಿಸಿದ ಅವರು, ಮುಂದಿನ ೬೦ ದಿನಗಳವರೆಗೆ ಯಾವುದೇ ಅಡೆತಡೆಯಿಲ್ಲದಂಥ ಸರಬರಾಜನ್ನು ದೇಶ  ಹೊಂದಿದೆ ಎಂದು ಹೇಳಿದರು.  ಪ್ರಧಾನಿ ನರೇಂದ್ರ ಮೋದಿಯವರ ದೂರದೃಷ್ಟಿಯಿಂದ ಕಳೆದ ೧೨ ವರ್ಷಗಳಲ್ಲಿ ಭಾರತದ ವಾಯುಯಾನ ವಲಯವು ಗಮನಾರ್ಹ ಅಭಿವೃದ್ಧಿಯನ್ನು ಕಂಡಿದೆ. ವಿಮಾನ ನಿಲ್ದಾಣಗಳ ಸಂಖ್ಯೆ ದ್ವಿಗುಣಗೊಂಡಿದೆ ಮತ್ತು ವಾಯುಯಾನ ವಲಯದಲ್ಲಿ ಹೆಚ್ಚಿನ ಕಾರ್ಯಪಡೆಯ ಅಗತ್ಯವಿದೆ ಎಂದರು. ಕಾರ್ಯಪಡೆಯನ್ನು ಹೆಚ್ಚಿಸಲು ಸರ್ಕಾರ ಕೌಶಲ್ಯ ಮತ್ತು ಕೋರ್ಸ್‌ಗಳನ್ನು ಬೆಂಬಲಿಸುತ್ತಿದೆ. ವಿಮಾನ ನಿಲ್ದಾಣಗಳು ಮತ್ತು ವಿಮಾನಯಾನ ಸಂಸ್ಥೆಗಳಿಗೆ ಅನುಗುಣವಾಗಿ ರಾಷ್ಟ್ರೀಯ ಕೌಶಲ್ಯ ಅಭಿವೃದ್ಧಿ ನಿಗಮ ಚಂಡೀಗಢ ಮತ್ತು ಮುಂಬೈನಲ್ಲಿ ವಾಯುಯಾನ ಕೌಶಲ್ಯಕ್ಕಾಗಿ ಎರಡು ಕೇಂದ್ರಗಳನ್ನು ಹೊಂದಿದೆ ಎಂದು ತಿಳಿಸಿದರು. ಕೇಂದ್ರಗಳಲ್ಲಿ ಒಂದು ಸಾವಿರ ೪೫೨ ಜನರಿಗೆ ತರಬೇತಿ ನೀಡಲಾಗಿದೆ ಮತ್ತು ಅವರ ಕೌಶಲ್ಯ ಮಟ್ಟ ಹಾಗೂ ಕೋರ್ಸ್‌ಗಳ ಪ್ರಕಾರ ಅವರನ್ನು ನೇಮಕ ಮಾಡಿಕೊಳ್ಳಲಾಗುತ್ತದೆ ಎಂದು ಸಚಿವ ಕೆ.ರಾಮಮೋಹನ್ ನಾಯ್ಡು ಮಾಹಿತಿ ನೀಡಿದರು.

<><><>

ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ನವದೆಹಲಿಯಲ್ಲಿ ಎಲೆಕ್ಟ್ರಾನಿಕ್ಸ್ ಘಟಕಗಳ ಉತ್ಪಾದನಾ ಯೋಜನೆ ಅಡಿಯಲ್ಲಿ ಕಂಪನಿಗಳಿಗೆ ಅನುಮೋದನೆಗಳನ್ನು ಹಸ್ತಾಂತರಿಸಿದರು. ಏಳು ಸಾವಿರದ ನೂರು ಕೋಟಿ ರೂಪಾಯಿಗಳಿಗೂ ಹೆಚ್ಚಿನ ಹೂಡಿಕೆಯಲ್ಲಿ ಒಟ್ಟು ೨೯ ಅರ್ಜಿಗಳನ್ನು ಅನುಮೋದಿಸಲಾಗಿದೆ. ಇದು ೧೪ ಸಾವಿರದ ಇನ್ನೂರಕ್ಕೂ ಹೆಚ್ಚು ಜನರಿಗೆ ಉದ್ಯೋಗವನ್ನು ಒದಗಿಸುವ ನಿರೀಕ್ಷೆಯಿದೆ. ಈ ಯೋಜನೆಗಳು ೮೪ ಸಾವಿರದ ಐದು ನೂರು ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಉತ್ಪಾದನೆಯ ನಿರೀಕ್ಷೆಯಿದೆ.

<><><>

ಯುದ್ಧವನ್ನು ಶೀಘ್ರದಲ್ಲೇ ಕೊನೆಗೊಳಿಸುವ ಒಪ್ಪಂದಕ್ಕೆ ಬರದಿದ್ದರೆ, ಇರಾನ್‌ನ ಇಂಧನ ಸಂಪನ್ಮೂಲಗಳು ಮತ್ತು ನೀರಿನ ಸಂಸ್ಕರಣಾ ಘಟಕಗಳು ಸೇರಿದಂತೆ ಇತರ ಪ್ರಮುಖ ಮೂಲಸೌಕರ್ಯಗಳನ್ನು ನಾಶಪಡಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬೆದರಿಕೆ ಹಾಕಿದ್ದಾರೆ. ಸುದ್ದಿ ವಾಹಿನಿಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಅವರು, ಅಮೆರಿಕ ಪಡೆಗಳು ಇರಾನ್‌ನ ಖಾರ್ಗ್ ದ್ವೀಪದ ತೈಲ ರಫ್ತು ಕೇಂದ್ರವನ್ನು ವಶಪಡಿಸಿಕೊಳ್ಳಬಹುದು ಎಂದು ಹೇಳಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿರುವ ಇರಾನ್, ತನ್ನ ಪ್ರದೇಶವನ್ನು ಆಕ್ರಮಿಸಿದರೆ, ಪರ್ಷಿಯನ್ ಕೊಲ್ಲಿಯನ್ನು ನಾಶಪಡಿಸುವುದಾಗಿ ಬೆದರಿಕೆ ಹಾಕಿದೆ. ಕುವೈತ್‌ನಲ್ಲಿ ಪ್ರಮುಖ ನೀರು ಮತ್ತು ವಿದ್ಯುತ್ ಸ್ಥಾವರವನ್ನು ಹಾಗೂ ಇಸ್ರೇಲ್‌ನ ತೈಲ ಸಂಸ್ಕರಣಾಗಾರವನ್ನು ಇರಾನ್ ನಿನ್ನೆ ನಾಶಪಡಿಸಿದೆ. ಇದಕ್ಕೆ ಪ್ರತಿಯಾಗಿ ಅಮೆರಿಕ ಮತ್ತು ಇಸ್ರೇಲ್ ಕೂಡ ಇರಾನ್ ವಿರುದ್ಧ ತಮ್ಮ ದಾಳಿಗಳನ್ನು ಮುಂದುವರಿಸಿವೆ.

<><><>

ಗುವಾಹಟಿಯ ಬರ್ಸಪರ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ರಾಜಸ್ಥಾನ್ ರಾಯಲ್ಸ್ ತಂಡ ಎಂಟು ವಿಕೆಟ್‌ಗಳಿಂದ ಭರ್ಜರಿ ಜಯ ಸಾಧಿಸಿತು.

ಮೊದಲು ಬ್ಯಾಟಿಂಗ್ ಮಾಡಿದ ಚೆನ್ನೈ ಸೂಪರ್ ಕಿಂಗ್ಸ್ ತಂಡ ೧೯.೪ ಓವರ್‌ಗಳಲ್ಲಿ ೧೨೭ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ರಾಜಸ್ಥಾನ್ ರಾಯಲ್ಸ್ ಪರ ಜೋಫ್ರಾ ಆರ್ಚರ್, ನಾಂಡ್ರೆ ಬರ್ಗರ್ ಮತ್ತು ರವೀಂದ್ರ ಜಡೇಜಾ ತಲಾ ೨ ವಿಕೆಟ್‌ಗಳನ್ನು ಕಬಳಿಸಿದರು. ೧೨೮ ರನ್‌ಗಳ ಗುರಿಯನ್ನು ಬೆನ್ನಟ್ಟಿದ ರಾಜಸ್ಥಾನ್ ರಾಯಲ್ಸ್ ತಂಡ ಕೇವಲ ೧೨.೧ ಓವರ್‌ಗಳಲ್ಲಿ ಎರಡು ವಿಕೆಟ್‌ಗಳನ್ನು ಕಳೆದುಕೊಂಡು ಜಯ ದಾಖಲಿಸಿತು. ರಾಜಸ್ಥಾನ್ ಪರ ವೈಭವ್ ಸೂರ್ಯವಂಶಿ ೧೭ ಎಸೆತಗಳಲ್ಲಿ ೫೨ ರನ್ ಗಳಿಸಿದರು. ನಾಂಡ್ರೆ ಬರ್ಗರ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಇಂದು ಚಂಡೀಗಢದಲ್ಲಿ ನಡೆಯುವ ೪ನೇ ಟಿ-೨೦ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಮತ್ತು ಗುಜಾರಾತ್ ಟೈಟಾನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><><>

ಛತ್ತೀಸ್‌ಗಢದಲ್ಲಿ ನಡೆಯುತ್ತಿರುವ ಖೇಲೋ ಇಂಡಿಯಾ ಬುಡಕಟ್ಟು ಕ್ರೀಡಾಕೂಟದ ಏಳನೇ ದಿನವಾದ ಇಂದು ರಾಯ್‌ಪುರದಲ್ಲಿ ಬಿಲ್ಲುಗಾರಿಕೆ ಮತ್ತು ಫುಟ್‌ಬಾಲ್ ಪಂದ್ಯಗಳು ನಡೆಯಲಿದ್ದು, ಕುಸ್ತಿ ಪಂದ್ಯಗಳು ಸುರ್ಗುಜಾದಲ್ಲಿ ನಡೆಯಲಿವೆ. ಫುಟ್‌ಬಾಲ್‌ನಲ್ಲಿ, ಮಹಿಳಾ ವಿಭಾಗದ ಎರಡೂ ಸೆಮಿಫೈನಲ್ ಪಂದ್ಯಗಳು ಇಂದು ನಡೆಯಲಿವೆ. ಮಹಿಳಾ ಹಾಕಿಯಲ್ಲಿ, ಮಿಜೋರಾಂ ಮತ್ತು ಒಡಿಶಾ ಫೈನಲ್ ಪ್ರವೇಶಿಸಿವೆ. ಪುರುಷರ ವಿಭಾಗದ ಹಾಕಿಯಲ್ಲಿ ಜಾರ್ಖಂಡ್ ಮತ್ತು ಒಡಿಶಾ ತಂಡಗಳ ನಡುವೆ ಫೈನಲ್ ಪಂದ್ಯಗಳು ನಡೆಯಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>